ಡಾ. ಶಾಲಿನಿ ರಜನೀಶ್, ಭಾ.ಆ.ಸೇ.,
ಮುಖ್ಯ ಕಾರ್ಯದರ್ಶಿ
Dr. SHALINI RAJNEESH, I.A.S.,
Chief Secretary

ಕರ್ನಾಟಕ ಸರ್ಕಾರ
Government of Karnataka

ಸಂಖ್ಯೆ: ಮುಕಾ/1013449/2025 ದಿನಾಂಕ: 23.05.2025

## ಟಿಪ್ಪಣಿ

ಈ ಹಿಂದಿನ ವರ್ಷಗಳ ವರ್ಗಾವಣೆ ಅವಧಿಯಲ್ಲಿ ಗಮನಿಸಿದ ಸನ್ನಿವೇಶಗಳ ಹಿನ್ನೆಲೆಯಲ್ಲಿ, ಸ್ಪಷ್ಟ ವರ್ಗಾವಣೆ ಮಾರ್ಗಸೂಚಿ ಹಾಗೂ ಸೂಚನೆಗಳನ್ನು ಹೊರಡಿಸಿದ್ದರೂ ಕೂಡ, ವರ್ಗಾವಣೆ ಮಾರ್ಗಸೂಚಿಗಳನ್ನು ಉಲ್ಲಂಘಿಸಿ ವರ್ಗಾವಣೆ ಆದೇಶಗಳನ್ನು ಹೊರಡಿಸಿದ್ದಲ್ಲಿ ಕರ್ನಾಟಕ ಆಡಳಿತ ನ್ಯಾಯಮಂಡಳಿಯಲ್ಲಿ ಬಹಳಷ್ಟು ಪ್ರಕರಣಗಳು ದಾಖಲಾಗುವುದನ್ನು ಗಮನಿಸಲಾಗಿದೆ.

ಆದುದರಿಂದ, ಪ್ರತಿಯೊಬ್ಬ ಇಲಾಖಾ ಕಾರ್ಯದರ್ಶಿ/ಮುಖ್ಯಸ್ಥರು ತಮ್ಮ ಇಲಾಖೆಯಲ್ಲಿ ಯಾವುದೇ ವರ್ಗಾವಣೆ ಆದೇಶ ಹೊರಡಿಸುವ ಮೊದಲು ಈ ಕೆಳಕಂಡ ಆಕ್ಷೇಪಣೆಗಳು ಉದ್ಭವಿಸದಂತೆ ಕಟ್ಟುನಿಟ್ಟಾಗಿ ದಿನಾಂಕ: 12.05.2025 ರಂದು ಹೊರಡಿಸಿದ ವರ್ಗಾವಣೆ ಮಾರ್ಗಸೂಚಿಗಳನ್ನು ಅನುಸರಿಸಿ ವರ್ಗಾವಣೆ ಆದೇಶಗಳನ್ನು ಮಾಡಲು ಸೂಚಿಸಿದೆ (ಪ್ರತಿ ಲಗತ್ತಿಸಿದೆ).

1) ಕನಿಷ್ಠ ಅವಧಿ ಪೂರ್ಣಗೊಳಿಸದೇ ಇರುವವರನ್ನು ವರ್ಗಾಯಿಸುವುದು.
2) ನಿವೃತ್ತರಾಗಲು 2 ವರ್ಷಕ್ಕಿಂತ ಕಡಿಮೆ ಸೇವಾವಧಿ ಇರುವವರ ವರ್ಗಾವಣೆಯನ್ನು ಸಕಾರಣವಿಲ್ಲದೆ ಮಾಡುವುದು.
3) ಅವಧಿ ಪೂರ್ವ ವರ್ಗಾವಣೆಗಳನ್ನು ಸಕಾರಣಗಳಿಲ್ಲದೆ ಮಾಡುವುದು
4) ವಿಶೇಷ ಚೇತನ ನೌಕರರಿಗೆ ನೀಡಲಾದ ವಿನಾಯಿತಿಗಳನ್ನು ಅನುಸರಿಸದೇ ವರ್ಗಾಯಿಸುವುದು.
5) ವರ್ಗಾವಣೆ ಆದೇಶದಲ್ಲಿ ಹುದ್ದೆಯನ್ನು ತೋರಿಸದಿರುವುದು.
6) ಸಾಮಾನ್ಯ ವರ್ಗಾವಣೆ ಅವಧಿ ಮುಗಿದ ನಂತರ ಮಾನ್ಯ ಮುಖ್ಯಮಂತ್ರಿಗಳ ಅನುಮೋದನೆ ಪಡೆಯದೆ ವರ್ಗಾಯಿಸುವುದು
7) ಸರ್ಕಾರದ ಆದೇಶದಲ್ಲಿ ಸೂಚಿಸಲಾದ ಇನ್ನಿತರೆ ವರ್ಗಾವಣೆ ಮಾರ್ಗಸೂಚಿಗಳನ್ನು ಅನುಸರಿಸದಿರುವುದು.

(ಡಾ.ಶಾಲಿನಿ ರಜನೀಶ್)
ಮುಖ್ಯ ಕಾರ್ಯದರ್ಶಿ

ಇವರಿಗೆ,
ಸರ್ಕಾರದ ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿ/
ಪ್ರಧಾನ ಕಾರ್ಯದರ್ಶಿ/ಕಾರ್ಯದರ್ಶಿಗಳು,